# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.

ಜ್ಞಾನಸಹ್ಯಾದ್ರಿ, ಶಂಕರಘಟ್ಟ-577415, ಶಿವಮೊಗ್ಗ, ಕರ್ನಾಟಕ.

Phone No: 08282-256166, mob: 7022254993ಇ-ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in


**Re-Accredited by NAAC with 'A' Grade, Ranked 73rd Place in NIRF-2019 and Secured 45th Place in SCIMAGO Institutional Rankings**

ಸಂಖ್ಯೆ: ಕುವಿ/ಪವಿ/ 304 /2020-21 ದಿನಾಂಕ: 22-05-2020.

## ಸುತ್ತೋಲೆ

ವಿಷಯ: ಕೋವಿಡ್-19 ಮಹಾಮಾರಿ ಸಾಂಕ್ರಾಮಿಕ ಖಾಯಿಲೆಯಿಂದ ಉಂಟಾದ ಪರಿಸ್ಥಿತಿಯಲ್ಲಿ ಸ್ನಾತಕೋತ್ತರ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ, ಪರೀಕ್ಷೆಗಳು ಮತ್ತು ಆರೋಗ್ಯದ ಕುರಿತು ಮುನ್ನೆಚ್ಚರಿಕೆವಹಿಸುವ ಬಗ್ಗೆ.

ಉಲ್ಲೇಖ ದಿನಾಂಕ:15-05-2020, ದಿ:16-05-2020 ಮತ್ತು ದಿ:19-05-2020 ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಿಕಾಯದ ಡೀನರು, ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು, ಶಾಲಾ ನಿರ್ದೇಶಕರು, ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಮತ್ತು ಎಲ್ಲಾ ಅಧ್ಯಾಪಕರುಗಳು ಮತ್ತು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾದ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ ಸದಸ್ಯರುಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಸಭೆಯ ನಿರ್ಣಯ.

*****

ದೇಶಾದ್ಯಂತ ಕೋವಿಡ್-19 ಮಹಾಮಾರಿ ಸಾಂಕ್ರಾಮಿಕ ಖಾಯಿಲೆಯು ಹರಡುತ್ತಿದ್ದು, ಅದರಿಂದ ಉಂಟಾದ ಪರಿಸ್ಥಿತಿಯನ್ನು ವಿಶ್ವವಿದ್ಯಾಲಯವು ಸಮರ್ಥವಾಗಿ ಎದುರಿಸಬೇಕಾಗಿದೆ. ಸ್ನಾತಕೋತ್ತರ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ, ಪರೀಕ್ಷೆಗಳು ಮತ್ತು ಆರೋಗ್ಯದ ಕುರಿತು ಮುನ್ನೆಚ್ಚರಿಕೆ ವಹಿಸುವ ದಿಸೆಯಲ್ಲಿ ದಿನಾಂಕ:15-05-2020, ದಿ:16-05-2020 ಮತ್ತು ದಿ:19-05-2020 ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಿಕಾಯದ ಡೀನರು, ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು, ಶಾಲಾ ನಿರ್ದೇಶಕರು, ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಮತ್ತು ಎಲ್ಲಾ ಅಧ್ಯಾಪಕರುಗಳು ಮತ್ತು ವಿಶ್ವವಿದ್ಯಾಲಯದ ಪ್ರಾಧಿಕಾರಗಳಾದ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ ಸದಸ್ಯರುಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಸಭೆಯನ್ನು ನಡೆಸಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿರುತ್ತದೆ. ಸದರಿ ನಿರ್ಣಯಗಳನ್ನು ಚಾಚುತಪ್ಪದೆ ಪ್ರತಿಯೊಬ್ಬರು ಪಾಲಿಸುವಂತೆ ಈ ಮೂಲಕ ಸೂಚಿಸಲಾಗಿದೆ.

1. ಲಾಕ್‌ಡೌನ್ ಅವಧಿ ಕೊನೆಗೊಂಡ ನಂತರ ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆ ನಡೆಸುವುದು.
2. ವಿದ್ಯಾರ್ಥಿಗಳ ಆರೋಗ್ಯದ ಜವಾಬ್ದಾರಿಯನ್ನು ಆಯಾ ಸ್ನಾತಕೋತ್ತರ ವಿಭಾಗದ ಅಧ್ಯಕ್ಷರು/ ಆಯಾ ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು ಹಾಗೂ ಅಂತರ ಜಿಲ್ಲಾ/ ಅಂತರ ರಾಜ್ಯ ವಿದ್ಯಾರ್ಥಿಗಳ ಮಾಹಿತಿಯನ್ನು ಕ್ರೋಢೀಕರಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.
3. ವಿದ್ಯಾರ್ಥಿಗಳು ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಮತ್ತು ಸ್ಯಾನಿಟೈಜರ್ ಬಳಕೆಯ ಮೂಲಕ ಶುಚಿತ್ವ ಕಾಪಾಡಿಕೊಳ್ಳುವುದು ಮುಂತಾದವುಗಳ ಬಗ್ಗೆ ಆಯಾ ಸ್ನಾತಕೋತ್ತರ ವಿಭಾಗದ ಅಧ್ಯಕ್ಷರು/ ಆಯಾ ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.
4. ಆನ್‌ಲೈನ್ ವ್ಯವಸ್ಥೆಯಲ್ಲಿ ತರಗತಿ/ಸೆಮಿನಾರ್‌ಗಳನ್ನು ಈಗಾಗಲೇ ನಡೆಸಲಾಗಿದ್ದು ಗ್ರಾಮಾಂತರ ಪ್ರದೇಶದ ಶೇಕಡಾ20ರಷ್ಟು ವಿದ್ಯಾರ್ಥಿಗಳಿಗೆ ನೆಟ್‌ವರ್ಕ್ ತೊಂದರೆಯಿಂದಾಗಿ ತರಗತಿಗಳಿಂದ

ವಂಚಿತರಾದ ವಿದ್ಯಾರ್ಥಿಗಳಿಗೆ ಲಾಕ್ ಡೌನ್ ಅವಧಿ ತೆರವುಗೊಂಡ ನಂತರ 02 ವಾರಗಳ ಅವಧಿಯನ್ನು ಪುನರ್‌ಮನನ ತರಗತಿಗಳಿಗೆ ಮೀಸಲಿಡುವಂತೆ ಆಯಾ ವಿಭಾಗಾಧ್ಯಕ್ಷರು ನಿಗಾವಹಿಸತಕ್ಕದ್ದು.

5. ಲಾಕ್‌ಡೌನ್ ತೆರವುಗೊಂಡ ನಂತರ ಸರ್ಕಾರದ ಆದೇಶಾನುಸಾರ ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿಯನ್ನು ಪರಿಚಲಿಸಲಾಗುವುದು.

6. ಎಲ್ಲಾ ಸ್ನಾತಕೋತ್ತರ ಪ್ರಾಯೋಗಿಕ ಪರೀಕ್ಷೆಗಳಿಗೆ ಮತ್ತು ಸ್ನಾತಕೋತ್ತರ ಅಂತಿಮ ವರ್ಷದ ವಿದ್ಯಾರ್ಥಿಗಳ ಪ್ರಾಜೆಕ್ಟ್ ಪರೀಕ್ಷೆಗಳಿಗೆ ಬಾಹ್ಯ ಪರೀಕ್ಷಕರನ್ನು ಆಹ್ವಾನಿಸುವ ಬದಲು ಇದೊಂದು ಬಾರಿ ವಿಶೇಷ ಸಂದರ್ಭವೆಂದು ಪರಿಗಣಿಸಿ, ಕೇವಲ ಆಂತರಿಕ ಪರೀಕ್ಷಕರಿಂದ ಪರೀಕ್ಷಾ ಕಾರ್ಯಗಳನ್ನು ನಡೆಸತಕ್ಕದ್ದು. ಒಂದು ವೇಳೆ ವಿಭಾಗದಲ್ಲಿ ಏಕ ಪ್ರಾಧ್ಯಾಪಕರು ಇರುವ ಸಂದರ್ಭದಲ್ಲಿ ತತ್ಸಮಾನ/ ಅಂತರ್‌ವಿಭಾಗೀಯ ಪ್ರಾಧ್ಯಾಪಕರುಗಳನ್ನು ಪರೀಕ್ಷಾ/ ಮೌಲ್ಯಮಾಪನ ಕಾರ್ಯಗಳಿಗೆ ಬಳಸಿಕೊಳ್ಳತಕ್ಕದ್ದು.

7. ಸ್ನಾತಕೋತ್ತರ ಅಂತಿಮ ವರ್ಷದ ವಿದ್ಯಾರ್ಥಿಗಳಿಂದ ಪ್ರಾಜೆಕ್ಟ್ ವರದಿಯನ್ನು ಮುದ್ರಣ ರೂಪದ ಬದಲಾಗಿ ಸಿ.ಡಿ., ಅಥವಾ ಕೈಬರಹದ ರೂಪದಲ್ಲಿ ಪಡೆಯತಕ್ಕದ್ದು.

8. ಸ್ನಾತಕೋತ್ತರ ವಿಷಯಗಳನ್ನು ಬೋಧಿಸುತ್ತಿರುವ ಪ್ರತಿ ಕಾಲೇಜಿನಲ್ಲಿ ಕೋವಿಡ್ – 19 ಪರಿಸ್ಥಿತಿಯನ್ನು ಎದುರಿಸಲು ಸಹಾಯ ವಾಣಿಯನ್ನು ಸ್ಥಾಪಿಸಿ ಅಧ್ಯಾಪಕರುಗಳ ಸಹಾಯದಿಂದ ವಿಧ್ಯಾರ್ಥಿಗಳಿಗೆ ಮಾನಸಿಕ ಹಾಗೂ ಆತ್ಮಸ್ಥೈರ್ಯ ಹೆಚ್ಚಿಸುವ ಕುರಿತು ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾಲಯ,
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ-577 451.

***ಇವರಿಗೆ,***

01. ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ./ಶಿವಮೊಗ್ಗ/ಕಡೂರು.
02. ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ, ಕಡೂರು./ ಐ.ಡಿ.ಎಸ್.ಜಿ. ಕಾಲೇಜು ಕ್ಯಾಂಪಸ್. ಚಿಕ್ಕಮಗಳೂರು
03. ಅಧ್ಯಕ್ಷರು, ಸ್ನಾತಕೋತ್ತರ ಸಂಸ್ಕೃತ ಅಧ್ಯಯನ ವಿಭಾಗ, ಸಹ್ಯಾದ್ರಿ ಕಾಲೇಜು, ಆವರಣ, ಶಿವಮೊಗ್ಗ.
04. ಅಧ್ಯಕ್ಷರು, ಸ್ನಾತಕೋತ್ತರ ಉರ್ದು ಅಧ್ಯಯನ ವಿಭಾಗ, ಸಹ್ಯಾದ್ರಿ ಕಾಲೇಜು, ಆವರಣ, ಶಿವಮೊಗ್ಗ.
05. ಅಧ್ಯಕ್ಷರು, ಮನೋವಿಜ್ಞಾನ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋದನಾ ವಿಭಾಗ, ಸಹ್ಯಾದ್ರಿ ಕಾಲೇಜು ಆವರಣ, ಶಿವಮೊಗ್ಗ.
06. ಪ್ರಾಂಶುಪಾಲರು, ಸಹ್ಯಾದ್ರಿ ವಿಜ್ಞಾನ ಕಾಲೇಜು, ಶಿವಮೊಗ್ಗ.
07. ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಕಾಲೇಜು, ಶಿವಮೊಗ್ಗ.
08. ಪ್ರಾಂಶುಪಾಲರು, ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಶಿವಮೊಗ್ಗ.
09. ಪ್ರಾಂಶುಪಾಲರು, ಆಚಾರ್ಯ ತುಳಸಿ ನ್ಯಾಷನಲ್ ಕಾಲೇಜು, ಶಿವಮೊಗ್ಗ.
10. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿವಮೊಗ್ಗ.
11. ಪ್ರಾಂಶುಪಾಲರು, ಜ್ಞಾನಸಾಗರ ಮಹಾವಿದ್ಯಾಲಯ, ಅಕ್ಷರ ಪಿ.ಜಿ. ಸೆಂಟರ್, ಜೆ.ಎನ್.ಎನ್.ಸಿ.ಇ, ಎದುರು ಅಕ್ಷರನಗರ, ಚಿನ್ನಂ ಮಂಬಪುರ, ಸವಳಂಗ ರಸ್ತೆ, ಶಿವಮೊಗ್ಗ.
12. ಪ್ರಾಂಶುಪಾಲರು, ಪಿ.ಇ.ಎಸ್. ಇನ್ಸ್ಟಿಟ್ಯೂಟ್ ಆಫ್ ಅಡ್ವಾನ್ಸ್‌ಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಶಿವಮೊಗ್ಗ.
13. ಪ್ರಾಂಶುಪಾಲರು, ಕೊಡಚಾದ್ರಿ ಪ್ರಥಮ ದರ್ಜೆ ಕಾಲೇಜು, ಹೊಸನಗರ.
14. ಪ್ರಾಂಶುಪಾಲರು, ತುಂಗಾ ಮಹಾವಿದ್ಯಾಲಯ, ತೀರ್ಥಹಳ್ಳಿ.
15. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತೀರ್ಥಹಳ್ಳಿ.
16. ಪ್ರಾಂಶುಪಾಲರು, ಸರ್.ಎಂ.ವಿ. ಸರ್ಕಾರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಭದ್ರಾವತಿ.
17. ಪ್ರಾಂಶುಪಾಲರು, ಸರ್.ಎಂ.ವಿ. ಸರ್ಕಾರಿ ವಿಜ್ಞಾನ ಕಾಲೇಜು, ಭದ್ರಾವತಿ.
18. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭದ್ರಾವತಿ.
19. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿಕಾರಿಪುರ.
20. ಪ್ರಾಂಶುಪಾಲರು, ಎಲ್.ಬಿ ಮತ್ತು ಎಸ್.ಬಿ.ಎಸ್, ಕಾಲೇಜು, ಸಾಗರ.
21. ಪ್ರಾಂಶುಪಾಲರು, ಇಂದಿರಾಗಾಂಧಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಸಾಗರ.

22. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಡೂರು.
23. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಪ್ಪ.
24. ಪ್ರಾಂಶುಪಾಲರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎನ್.ಆರ್.ಪುರ.
25. ಪ್ರಾಂಶುಪಾಲರು, ಐ.ಡಿ.ಎಸ್.ಜಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಮಗಳೂರು.
26. ಪ್ರಾಂಶುಪಾಲರು, ಎಂ.ಇ.ಎಸ್/ಎಂ.ಪಿ.ಎಸ್ ಪ್ರಥಮ ದರ್ಜೆ ಮಹಿಳಾ ಕಾಲೇಜು, ಚಿಕ್ಕಮಗಳೂರು.
27. ಪ್ರಾಂಶುಪಾಲರು, ಶ್ರೀ.ಜಗದ್ಗುರು ಚಂದ್ರಶೇಖರ ಭಾರತಿ ಮೆಮೊರಿಯಲ್ ಕಾಲೇಜು, ಶೃಂಗೇರಿ.
28. ಪ್ರಾಂಶುಪಾಲರು, ಎಜುರೈಟ್ ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಸೈನ್ಸಸ್, ಆಲ್ಕೊಳ, ಶಿವಮೊಗ್ಗ
29. ಪ್ರಾಂಶುಪಾಲರು, ಕಟೀಲ್ ಅಶೋಕ್ ಪೈ ಮೆಮೋರಿಯಲ್ ಇನ್ಸ್ಟ್ಯೂಟ್, ವಿನೋಧಿನಿ ಕಟ್ಟಡ, ಪಾರ್ಕ್ ಬಡಾವಣೆ, ಮಲ್ಲಿಕಾರ್ಜುನಾ ಚಿತ್ರ ಮಂದಿರದ ಹತ್ತಿರ, ದುರ್ಗಿಗುಡಿ, ಶಿವಮೊಗ್ಗ
30. ಪ್ರಾಂಶುಪಾಲರು, ಕುಮದ್ವತಿ ಪ್ರಥಮ ದರ್ಜೆ ಕಾಲೇಜು,ಶಿಕಾರಿಪುರ.
31. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
32. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
33. ಆಪ್ತಶಾಖೆ, ಮಾನ್ಯಕುಲಪತಿಗಳು, ಕುಲಸಚಿವ(ಆಡಳಿತ), ಕುಲಸಚಿವ(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
34. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಶೇಷಾದ್ರಿಪುರಂ ರಸ್ತೆ, ಬೆಂಗಳೂರು.
35. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
36. ಸಂಚಾಲಕರು, ಎಸ್.ಸಿ/ಎಸ್.ಟಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
37. ಸಂಚಾಲಕರು, ಓ.ಬಿ.ಸಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
38. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
39. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
40. ಅಧೀಕ್ಷಕರು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
41. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ - ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
42. ನಿರ್ದೇಶಕರು, ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
43. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
44. ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
45. ಕಛೇರಿ ಪ್ರತಿ.